# ಕರ್ನಾಟಕ ಸರ್ಕಾರ

ಕೃಇ 75 ಕೃಕೈಉ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 12-05-2017

## ಅಧಿಸೂಚನೆ

ವಿಷಯ: ಕರ್ನಾಟಕ ರೈತ ಸುರಕ್ಷ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು 2017 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಅನುಷ್ಠಾನಗೊಳಿಸಲು ವಿಮಾ ಘಟಕಗಳು, ಬೆಳೆಗಳು ಹಾಗು ಇತರೆ ವಿವರಗಳನ್ನು ಅಧಿಸೂಚಿಸುವ ಬಗ್ಗೆ.

2017ರ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಈ ಮುಂದಿನ ಅಂಶಗಳನ್ನೊಳಗೊಂಡಂತೆ ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

2017-18ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಸದರಿ ಯೋಜನೆಯಡಿ ಮುಖ್ಯ ಬೆಳೆಗಳನ್ನು ಹಾಗು ಇತರೆ ಬೆಳೆಗಳನ್ನು ತಾಲ್ಲೂಕುವಾರು ಪರಿಗಣಿಸುವುದು. ಆಯಾ ತಾಲ್ಲೂಕಿನಲ್ಲಿ ಮುಖ್ಯ ಬೆಳೆಗಳಿಗೆ ಗ್ರಾಮ ಪಂಚಾಯತ್/ ನಗರ ಸ್ಥಳೀಯ ಸಂಸ್ಥೆಗಳನ್ನು ವಿಮಾ ಘಟಕವಾಗಿ ಹಾಗೂ ಇತರೆ ಬೆಳೆಗಳಿಗೆ ಹೋಬಳಿಯನ್ನು ವಿಮಾ ಘಟಕವಾಗಿ ಪರಿಗಣಿಸುವುದು. ವಿವಿಧ ಆಹಾರ, ಎಣ್ಣೆಕಾಳು, ವಾಣಿಜ್ಯ ಮತ್ತು ತೋಟಗಾರಿಕೆ ಬೆಳೆಗಳು ಮತ್ತು ವಿಮಾ ಘಟಕಗಳ ಸಂಖ್ಯೆಯನ್ನು ಈ ಮುಂದಿನಂತೆ ನೀಡಲಾಗಿದೆ.

| ಕ್ರ ಸಂ | ಬೆಳೆಗಳು | ಹೋಬಳಿಗಳ ಸಂಖ್ಯೆ | ಗ್ರಾಮ ಪಂಚಾಯತಿ/ನಗರ ಸ್ಥಳೀಯ ಸಂಸ್ಥೆಗಳ ಸಂಖ್ಯೆ |
|---|---|---|---|
| 1 | ಭತ್ತ (ನೀರಾವರಿ) | 241 | 1349 |
| 2 | ಭತ್ತ (ಮಳೆ ಆಶ್ರಿತ) | 82 | 1136 |
| 3 | ಮುಸುಕಿನಜೋಳ (ನೀರಾವರಿ) | 198 | 691 |
| 4 | ಮುಸುಕಿನಜೋಳ(ಮಳೆ ಆಶ್ರಿತ) | 197 | 1511 |
| 5 | ಜೋಳ (ನೀರಾವರಿ) | 99 | - |
| 6 | ಜೋಳ (ಮಳೆ ಆಶ್ರಿತ) | 220 | 94 |
| 7 | ರಾಗಿ (ನೀರಾವರಿ) | 175 | - |
| 8 | ರಾಗಿ (ಮಳೆ ಆಶ್ರಿತ) | 211 | 1036 |
| 9 | ಸಜ್ಜೆ (ನೀರಾವರಿ) | 82 | - |
| 10 | ಸಜ್ಜೆ (ಮಳೆ ಆಶ್ರಿತ) | 178 | 315 |
| 11 | ನವಣೆ (ಮಳೆ ಆಶ್ರಿತ) | 73 | - |
| 12 | ಸಾವೆ (ಮಳೆ ಆಶ್ರಿತ) | 33 | - |
| 13 | ಬರಗು (ಮಳೆ ಆಶ್ರಿತ) | 115 | - |
| 14 | ತೊಗರಿ (ನೀರಾವರಿ) | 48 | 88 |
| 15 | ತೊಗರಿ (ಮಳೆ ಆಶ್ರಿತ) | 271 | 927 |
| 16 | ಹೆಸರು (ಮಳೆ ಆಶ್ರಿತ) | 253 | 329 |

| | | | |
|---|---|---|---|
| 17 | ಹುರುಳಿ (ಮಳೆ ಆಶ್ರಿತ) | 285 | - |
| 18 | ಸೋಯಾ ಅವರೆ (ನೀರಾವರಿ) | 26 | - |
| 19 | ಸೋಯಾ ಅವರೆ (ಮಳೆ ಆಶ್ರಿತ) | 56 | 284 |
| 20 | ಸೂರ್ಯಕಾಂತಿ (ನೀರಾವರಿ) | 163 | - |
| 21 | ಸೂರ್ಯಕಾಂತಿ (ಮಳೆ ಆಶ್ರಿತ) | 233 | 164 |
| 22 | ಎಳ್ಳು (ಮಳೆ ಆಶ್ರಿತ) | 200 | - |
| 23 | ಹರಳು (ಮಳೆ ಆಶ್ರಿತ) | 70 | - |
| 24 | ನೆಲಗಡಲೆ (ಶೇಂಗಾ) (ನೀರಾವರಿ) | 128 | 41 |
| 25 | ನೆಲಗಡಲೆ (ಶೇಂಗಾ) (ಮಳೆ ಆಶ್ರಿತ) | 296 | 468 |
| 26 | ಅವರೆ (ಮಳೆ ಆಶ್ರಿತ) | 110 | - |
| 27 | ಅಲಸಂದೆ (ಮಳೆ ಆಶ್ರಿತ) | 98 | - |
| 28 | ಹತ್ತಿ (ನೀರಾವರಿ) | 146 | - |
| 29 | ಹತ್ತಿ (ಮಳೆ ಆಶ್ರಿತ) | 204 | - |
| 30 | ಟೊಮ್ಯಾಟೊ | 172 | - |
| 31 | ಆಲೂಗಡ್ಡೆ (ನೀರಾವರಿ) | 17 | - |
| 32 | ಆಲೂಗಡ್ಡೆ (ಮಳೆ ಆಶ್ರಿತ) | 42 | - |
| 33 | ಈರುಳ್ಳಿ (ನೀರಾವರಿ) | 143 | - |
| 34 | ಈರುಳ್ಳಿ (ಮಳೆ ಆಶ್ರಿತ) | 84 | - |
| 35 | ಕೆಂಪು ಮೆಣಸಿನಕಾಯಿ (ನೀರಾವರಿ) | 41 | - |
| 36 | ಕೆಂಪು ಮೆಣಸಿನಕಾಯಿ (ಮಳೆ ಆಶ್ರಿತ) | 36 | - |
| 37 | ಎಲೆಕೋಸು | 9 | - |
| 38 | ಬದನೆ | 28 | - |
| 39 | ಬೀನ್ಸ್ | 21 | - |
| 40 | ಅರಿಶಿನ | 39 | - |
| | ಒಟ್ಟು | 5123 | 8433 |

ಪ್ರಸ್ತುತ ಸಾಲು ಮತ್ತು ಹಂಗಾಮಿನಲ್ಲಿ ಸ್ಥಳೀ ನಿರ್ದಿಷ್ಟ ಪ್ರಕೃತಿ ವಿಕೋಪಗಳಾದ ಆಲಿಕಲ್ಲು ಮಳೆ (Hailstorm) ಭೂಕುಸಿತ, (Landslide) ಮತ್ತು ಬೆಳೆ ಮುಳುಗಡೆ (Inundation) ಸಂದರ್ಭದಲ್ಲಿ ಬೆಳೆ ನಷ್ಟವುಂಟಾದರೆ ವೈಯಕ್ತಿಕ ನಷ್ಟದ ನಿರ್ಧರಣೆಗಾಗಿ ರಾಜ್ಯದ ಎಲ್ಲಾ ಜಿಲ್ಲೆಗಳನ್ನು ಅಧಿಸೂಚಿಸಲಾಗಿದೆ.

2017-18 ಸಾಲಿನ ಮುಂಗಾರು ಹಂಗಾಮಿನಲ್ಲಿ ಇಂಡೆಮ್ನಿಟಿ ಮೊತ್ತವನ್ನು ನೀರಾವರಿ ಬೆಳೆಗಳಿಗೆ ಶೇ.90 ಹಾಗು ಮಳೆ ಆಶ್ರಿತ ಬೆಳೆಗಳಿಗೆ ಶೇ. 80 ಎಂದು ನಿಗಧಿಪಡಿಸಲಾಗಿದೆ.

ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ವಿಮಾ ಮೊತ್ತವು ಬೆಳೆವಾರು ಹಣಕಾಸು ಪ್ರಮಾಣದ (Scale of Finance) ಆಧಾರದ ಮೇಲೆ ನಿರ್ಧರಿಸತಕ್ಕದ್ದು.

ವಿಮಾ ಕಂತನ್ನು ಲೆಕ್ಕ ಹಾಕಲು ಹಿಂದಿನ ಹತ್ತು ವರ್ಷಗಳ ಅಂದರೆ 2007 ನೇ ಸಾಲಿನಿಂದ 2016 ನೇ ಸಾಲಿನವರೆಗೆ ಇಳುವರಿ ಮಾಹಿತಿಯನ್ನು ಪರಿಗಣಿಸುವುದು ಮತ್ತು ಪ್ರಾರಂಭಿಕ ಇಳುವರಿ ಲೆಕ್ಕ ಹಾಕುವಾಗ ಹಿಂದಿನ 7 ವರ್ಷಗಳು ಅಂದರೆ 2010 ವರ್ಷದಿಂದ 2016 ವರ್ಷದವರೆಗಿನ ಇಳುವರಿಯನ್ನು ಪರಿಗಣಿಸುವುದು (ಅನುಬಂಧ-V) ಹಾಗೂ ಇವರಲ್ಲಿ ಗರಿಷ್ಠ 2 ವರ್ಷಗಳ ವಿಪತ್ತೊದಗಿದ ವರ್ಷಗಳ ಇಳುವರಿ ಮಾಹಿತಿಯನ್ನು 7 ವರ್ಷಗಳ ಸರಾಸರಿ ಇಳುವರಿಗಿಂತ ಕಡಿಮೆಯಿದ್ದಲ್ಲಿ ಮಾತ್ರ ಆ ವರ್ಷಗಳ ಮಾಹಿತಿಯನ್ನು ಹೊರತುಪಡಿಸಿ ಪರಿಗಣಿಸತಕ್ಕದ್ದು.

ಹವಾಮಾನ ಆಧಾರಿತ ಬೆಳೆವಿಮಾ ಯೋಜನೆಯಡಿ 2017-18ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ವಿವಿಧ ವಾರ್ಷಿಕ ವಾಣಿಜ್ಯ ಮತ್ತು ತೋಟಗಾರಿಕಾ ಬೆಳೆಗಳನ್ನು ವಿವಿಧ ವಿಮಾ ಘಟಕಗಳಿಗೆ ಅಳವಡಿಸಿ ಸರ್ಕಾರದ ಅಧಿಸೂಚನೆಯನ್ನು ತೋಟಗಾರಿಕೆ ಇಲಾಖೆಯಿಂದ ಹೊರಡಿಸತಕ್ಕದ್ದು.

ತಾಲ್ಲೂಕುವಾರು ಮುಖ್ಯ ಬೆಳೆಗಳ ಹಾಗು ಇತರೆ ಬೆಳೆಗಳ ಪಟ್ಟಿಯನ್ನು ಅನುಬಂಧ -I ರಲ್ಲಿ ನೀಡಲಾಗಿದೆ.

ವಿವಿಧ ಆಹಾರ, ಎಣ್ಣೆಕಾಳು, ವಾರ್ಷಿಕ ವಾಣಿಜ್ಯ ಬೆಳೆಗಳು ಮತ್ತು ತೋಟಗಾರಿಕಾ ಬೆಳೆವಾರು ವಿಮಾ ಘಟಕಗಳ ಪಟ್ಟಿಯನ್ನು ಅನುಬಂಧ –II ರಲ್ಲಿ (ಮುಖ್ಯ ಬೆಳೆಗಳು) ಮತ್ತು ಅನುಬಂಧ -III ರಲ್ಲಿ (ಇತರ ಬೆಳೆಗಳು) ನೀಡಲಾಗಿದೆ.

ಪ್ರಸ್ತುತ ಸಾಲು ಮತ್ತು ಹಂಗಾಮಿನ ಬೆಳೆಗಳಿಗೆ ನಿಗಧಿ ಪಡಿಸಲಾಗಿರುವ ಇಂಡೆಮ್ನಿಟಿ ಮಟ್ಟ, ವಿಮಾ ಮೊತ್ತ ಮತ್ತು ಶೇಕಡವಾರು ಗರಿಷ್ಠ ರೈತರ ಪಾಲಿನ ವಿಮಾಕಂತಿನ ವಿವರಗಳನ್ನು ಅನುಬಂಧ- IV ರಲ್ಲಿ ನೀಡಲಾಗಿದೆ.

ಒಂದು ವೇಳೆ ಒಂದು ಅಧಿಸೂಚಿತ ಘಟಕದಲ್ಲಿ ಶೇಕಡಾ 25 ಕ್ಕಿಂತ ಹೆಚ್ಚು ವಿಸ್ತೀರ್ಣದಲ್ಲಿ ಬೆಳೆ ನಷ್ಟವಾದರೆ ಆ ಅಧಿಸೂಚಿತ ಘಟಕದಲ್ಲಿ ಬೆಳೆ ವಿಮೆಗೆ ಒಳಪಟ್ಟ ರೈತರಲ್ಲಿ ಬೆಳೆ ನಷ್ಟವಾದ ರೈತರಿಗೆ ಮಾತ್ರ ಕೇಂದ್ರ ಸರ್ಕಾರದ ಮಾರ್ಗಸೂಚಿಯ ಪ್ರಕಾರ ಮಾದರಿ ಸಮೀಕ್ಷೆಗನುಗುಣವಾಗಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸತಕ್ಕದ್ದು. ಇಂತಹ ಸ್ಥಳೀಯ ಗಂಡಾಂತರಗಳ ಕಾರಣದಿಂದ ಬೆಳೆ ನಷ್ಟ ಸಂಭವಿಸಿದರೆ, ಬೆಳೆ ವಿಮೆ ಮಾಡಿಸಿರುವ ರೈತರು ಈ ಬಗ್ಗೆ ಸಂಬಂಧಪಟ್ಟ ಹಣಕಾಸು ಸಂಸ್ಥೆ ಅಥವಾ ಅನುಷ್ಠಾನಗೊಳಿಸುವ ವಿಮಾ ಸಂಸ್ಥೆಗಳ ಕಛೇರಿಗಳಿಗೆ ತಕ್ಷಣ ಸೂಚನೆ ನೀಡಬೇಕು ಮತ್ತು ಯಾವುದೇ ಸಂದರ್ಭದಲ್ಲಿ ವಿಮೆ ಮಾಡಿಸಿದ ಬೆಳೆಯ ವಿವರಗಳನ್ನು, ಹಾನಿಯ ವ್ಯಾಪ್ತಿ ಹಾಗೂ ಹಾನಿಗೆ ಕಾರಣಗಳನ್ನು 48 ಗಂಟೆಗಳೊಳಗಾಗಿ ತಿಳಿಸಬೇಕು. ನಷ್ಟದ ಬಗೆಗಿನ ಮಾಹಿತಿಯನ್ನು ಸ್ವೀಕರಿಸಿದ ಮೇಲೆ ವಿಮಾ ಸಂಸ್ಥೆಗಳು ಬೆಳೆ ನಷ್ಟವನ್ನು ನಿರ್ಧರಿಸುವುದಕ್ಕೆ ನಷ್ಟ ನಿರ್ಧಾರಕರನ್ನು ಸಂಬಂಧಪಟ್ಟ ಪ್ರದೇಶಕ್ಕೆ ನಿಯೋಜಿಸಬೇಕು. ಜಿಲ್ಲಾ ಕಂದಾಯ ಇಲಾಖೆ, ಕೃಷಿ ಹಾಗು ತೋಟಗಾರಿಕಾ ಇಲಾಖೆಯ ಆಡಳಿತವು ಬೆಳೆ ನಷ್ಟದ ಪ್ರಮಾಣವನ್ನು ನಿರ್ಧರಿಸುವಲ್ಲಿ ವಿಮಾ ಸಂಸ್ಥೆಯವರಿಗೆ ನೆರವು ನೀಡತಕ್ಕದ್ದು.

ವಾಣಿಜ್ಯ ವಿಮಾ ಕಂತಿನ ದರ ಹಾಗೂ ರೈತರು ಕಟ್ಟಬೇಕಾಗಿರುವ ವಿಮಾ ಕಂತಿನ ದರದಲ್ಲಿನ ವ್ಯತ್ಯಾಸದ ಮೊಬಲಗಿನಲ್ಲಿ ಶೇಕಡಾ 50ರಷ್ಟು ಹಣವನ್ನು ರಾಜ್ಯ ಸರ್ಕಾರವು ಭರಿಸಲು ಹಾಗೂ ಈ ಹಣವನ್ನು ಅನುಷ್ಠಾನಗೊಳಿಸುವ ವಿವಿಧ ವಿಮಾ ಸಂಸ್ಥೆಗಳಿಗೆ, ನಿಯಮಾನುಸಾರ ಪಾವತಿಸಲು ಮಂಜೂರಾತಿ ನೀಡಲಾಗಿದೆ.

ಪ್ರಸ್ತುತ ಸಾಲು ಹಾಗು ಹಂಗಾಮಿನಲ್ಲಿ ವಿವಿಧ ವಿಮಾ ಘಟಕಗಳಲ್ಲಿ ಅಧಿಸೂಚಿಸಲಾದ ಬೆಳೆಗಳಿಗೆ ಪ್ರಸಕ್ತ ಹಂಗಾಮಿಗಾಗಿ ಬೆಳೆ ಸಾಲ ಮಂಜೂರಾದ ಎಲ್ಲಾ ರೈತರನ್ನು ಕಡ್ಡಾಯವಾಗಿ ಈ ಯೋಜನೆಯಡಿಯಲ್ಲಿ ಒಳಪಡಿಸತಕ್ಕದ್ದು. ಮಂಜೂರಾದ ಬೆಳೆ ಸಾಲದ ಮೊತ್ತದ ಜೊತೆಗೆ ಹೆಚ್ಚುವರಿಯಾಗಿ ರೈತರ ವಿಮಾ ಕಂತನ್ನು ನಿಯಮಾನುಸಾರ ಮಂಜೂರು ಮಾಡತಕ್ಕದ್ದು.

ಪ್ರಸ್ತುತ ಸಾಲು ಹಾಗು ಹಂಗಾಮಿನಲ್ಲಿ ವಿವಿಧ ವಿಮಾ ಘಟಕಗಳಲ್ಲಿ ಅಧಿಸೂಚಿಸಲಾದ ಬೆಳೆಗಳಿಗೆ ಇಚ್ಛೆಯುಳ್ಳ ಬೆಳೆ ಸಾಲ ಪಡೆಯದ ರೈತರು ಯೋಜನೆಯಡಿ ಭಾಗವಹಿಸಬಹುದು. ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ / ಖಾತೆ ಪುಸ್ತಕ / ಪಾಸ್ ಪುಸ್ತಕ / ಕಂದಾಯ ರಶೀದಿಯನ್ನು ನೀಡತಕ್ಕದ್ದು.

ಬೆಳೆವಿಮೆಗೆ ನೋಂದಾಯಿಸಲು ಬೆಳೆಸಾಲ ಪಡೆದ ಹಾಗು ಬೆಳೆ ಸಾಲ ಪಡೆಯದ ರೈತರಿಗೆ ಜಿಲ್ಲಾವಾರು ಹಾಗೂ ಬೆಳೆವಾರು ಕೊನೆಯ ದಿನಾಂಕವನ್ನು, ಬಿತ್ತನೆ ಅವಧಿ ಮತ್ತು ಕಟಾವು ಅವಧಿಯನ್ನು ಹಾಗು Prevented sowing invoke ಮಾಡಲು ಕೊನೆಯ ದಿನಾಂಕವನ್ನು ಅನುಬಂಧ - VI ರಲ್ಲಿ ನೀಡಲಾಗಿದೆ.

ಈ ಯೋಜನೆಯಡಿಯಲ್ಲಿ ಬೆಳೆ ಸಾಲ ಪಡೆಯುವ ರೈತರು ಅಂದಾಜು/ಉಪೇಕ್ಷಿತ ಬೆಳೆ ಬಿತ್ತನೆ ಆಧಾರದ ಮೇಲೆ ಬಿತ್ತನೆ ಪೂರ್ವದಲ್ಲಿ ಪಾಲ್ಗೊಳ್ಳಬಹುದು. ಬೆಳೆ ವಿಮೆಗೆ ನೋಂದಾಯಿಸಿದ ನಂತರ ಬೇರೆ ಬೆಳೆ ಬಿತ್ತನೆ ಮಾಡಿದಲ್ಲಿ ಯೋಜನೆಯಲ್ಲಿ ಭಾಗವಹಿಸಲು ಕೇಂದ್ರ ಸರ್ಕಾರದ ಮಾರ್ಗಸೂಚಿಯಲ್ಲಿ ನಿಗದಿಪಡಿಸಿದ ಅವಧಿಯೊಳಗಾಗಿ ನೋಂದಾಯಿಸಿದ ಆರ್ಥಿಕ ಸಂಸ್ಥೆಗಳಲ್ಲಿ ಬಿತ್ತನೆ ದೃಢೀಕರಣಪತ್ರ ನೀಡಿ ವಿಮೆ ಮಾಡಿಸಿದ ಬೆಳೆಯನ್ನು ಬದಲಾಯಿಸತಕ್ಕದ್ದು. ಅಂತಹ ಸಂದರ್ಭದಲ್ಲಿ ಹೆಚ್ಚುವರಿ ವಿಮಾ ಕಂತಿನ ವ್ಯತ್ಯಾಸದ ಮೊತ್ತವನ್ನು ರೈತರು ಭರಿಸತಕ್ಕದ್ದು ಅಥವಾ ಹೆಚ್ಚುವರಿ ವಿಮಾ ಕಂತನ್ನು ಪಾವತಿಸಿದ್ದಲ್ಲಿ ರೈತರಿಗೆ ಮರುಪಾವತಿಸುವುದು.

ಆರ್ಥಿಕ ಸಂಸ್ಥೆಗಳು "ಸಂರಕ್ಷಣೆ" ಪೋರ್ಟಲ್ ಮೂಲಕ ಪ್ರಸ್ತಾವನೆಗಳನ್ನು ಹಾಗೂ ವಿಮಾ ಸಂಸ್ಥೆಗಳಿಗೆ ವಿಮಾ ಕಂತಿನ ಮೊತ್ತವನ್ನು ನೀಡುವ ಕೊನೆಯ ದಿನಾಂಕವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಪಾಲಿಸತಕ್ಕದ್ದು.

ಬ್ಯಾಂಕುಗಳಿಗೆ ವಿಮಾ ಸಂಸ್ಥೆಯು ರೈತರ ವಿಮಾ ಕಂತಿನ ಮೊತ್ತದಲ್ಲಿ ಶೇ. 4 ರಷ್ಟು ಸೇವಾ ಶುಲ್ಕವನ್ನು ನೀಡತಕ್ಕದ್ದು.

ಬ್ಯಾಂಕುಗಳು ಅಧಿಕೃತವಾಗಿ ವಿಮೆ ಮಾಡಿಸಿದ ರೈತರ ಎಲ್ಲಾ ವಿವರಗಳ ಪ್ರಸ್ತಾವನೆಯನ್ನು "ಸಂರಕ್ಷಣೆ" ಪೋರ್ಟಲ್ ನಲ್ಲಿ ಅಳವಡಿಸಿ ವಿಮಾ ಸಂಸ್ಥೆಗೆ ಸಲ್ಲಿಸುವುದು. ಅಲ್ಲಿಯವರೆಗೆ ಬ್ಯಾಂಕುಗಳಿಗೆ ವಿಮಾ ಸಂಸ್ಥೆಗಳು ಸೇವಾ ಶುಲ್ಕವನ್ನು ಬಿಡುಗಡೆ ಮಾಡತಕ್ಕದ್ದಲ್ಲ.

ಗ್ರಾಮ ಪಂಚಾಯತಿಗಳಲ್ಲಿ ನೊಂದಣಿ ಮಾಡಿ ಸಂರಕ್ಷಣೆ ಪೋರ್ಟಲ್ ನಲ್ಲಿ ಅಳವಡಿಸಿದ ಪ್ರತಿ ಅರ್ಜಿಗೆ ರೂ.5/- ರಂತೆ ಅನುಷ್ಠಾನ ವಿಮಾ ಸಂಸ್ಥೆಗಳು ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಪಾವತಿಸತಕ್ಕದ್ದು.

ವಿಮಾ ಸಂಸ್ಥೆಯು ಬೆಳೆ ವಿಮಾ ನಷ್ಟ ಪರಿಹಾರವನ್ನು ರೈತರ ಖಾತೆಗೆ ಜಮಾ ಮಾಡಿದ ವಿವರಗಳನ್ನು ಬ್ಯಾಂಕುಗಳಿಗೆ ನೀಡತಕ್ಕದ್ದು ಹಾಗು ಬ್ಯಾಂಕುಗಳು ಈ ವಿವರಗಳನ್ನು ನೋಟೀಸ್ ಬೋರ್ಡಿನಲ್ಲಿ ಪ್ರಕಟಿಸತಕ್ಕದ್ದು.

ವಿಮಾ ಸಂಸ್ಥೆಗಳು ಬೆಳೆ ಸಾಲ ಪಡೆಯದ ರೈತರನ್ನು ತಮ್ಮ ಅಧಿಕೃತ ಏಜೆಂಟರ ಮೂಲಕವೂ ಸಹ ಯೋಜನೆಯಡಿ ನೋಂದಾಯಿಸಲು ಅನುಮತಿ ನೀಡಲಾಗಿದೆ.

ಪ್ರಸಕ್ತ ಸಾಲು ಮತ್ತು ಹಂಗಾಮಿನಲ್ಲಿ ಅಧಿಸೂಚಿತ ವಿಮಾ ಘಟಕದಲ್ಲಿ ಶೇಕಡಾ 75 ಕ್ಕಿಂತ ಹೆಚ್ಚಿನ ಕ್ಷೇತ್ರದಲ್ಲಿ ಬಿತ್ತನೆ ವಿಫಲಗೊಂಡಲ್ಲಿ ವಿಮಾ ಮೊತ್ತದ ಗರಿಷ್ಠ ಶೇಕಡಾ 25 ರಷ್ಟು ಪರಿಹಾರವನ್ನು ವಿಮಾ ಸಂಸ್ಥೆಯು ವಿಮೆ ಮಾಡಿಸಿದ ಎಲ್ಲಾ ರೈತರಿಗೆ ಇತ್ಯರ್ಥಪಡಿಸಿ ಮುಂದಿನ ಅವಧಿಗೆ ಅವರುಗಳ ಬೆಳೆ ವಿಮೆಯನ್ನು ರದ್ದುಪಡಿಸತಕ್ಕದ್ದು. ಈ ವಿಮಾ ರಕ್ಷಣೆಯು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ತಾಲ್ಲೂಕುವಾರು ಮುಖ್ಯ ಬೆಳೆಗಳಿಗೆ ಮಾತ್ರ ಅನ್ವಯಿಸುತ್ತದೆ. ಈ ಸಂಬಂಧ ಬಿತ್ತನೆ ಕ್ಷೇತ್ರದ ವರದಿಯನ್ನು ಸಲ್ಲಿಸಲು ಸಂಬಂಧಿಸಿದ ಜಿಲ್ಲಾಧಿಕಾರಿಯವರನ್ನು ಹಾಗೂ ಮಳೆ ಮತ್ತು ಇತರೆ ಕೃಷಿ ಹವಾಮಾನದ ವರದಿಯನ್ನು ನೀಡಲು ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಬೆಂಗಳೂರು ಇವರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.ನೋಡಲ್ ಅಧಿಕಾರಿಗಳಿಂದ ವರದಿ ಬಂದನಂತರ ಒಂದು ತಿಂಗಳೊಳಗೆ ವಿಮಾ ಸಂಸ್ಥೆಯು ಬೆಳೆ ವಿಮೆ ಮಾಡಿಸಿದ ರೈತರಿಗೆ ಮೇಲಿನಂತೆ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸತಕ್ಕದ್ದು.

ಪ್ರಸಕ್ತ ಸಾಲು ಮತ್ತು ಹಂಗಾಮಿನಲ್ಲಿ ಅಧಿಸೂಚಿತ ವಿಮಾ ಘಟಕದಲ್ಲಿ ಬಿತ್ತನೆಯಾದ ನಂತರ ಕಟಾವಿಗೆ ಮೊದಲು ಸಾಮಾನ್ಯ ಇಳುವರಿಗಿಂತ ಶೇಕಡಾ 50 ಕ್ಕಿಂತ ಹೆಚ್ಚಿನ ಬೆಳೆ ನಷ್ಟ ಸಂಭವಿಸಿದಲ್ಲಿ ವಿಮೆ ಮಾಡಿಸಿದ ರೈತರಿಗೆ ಅಂದಾಜು ಮಾಡಲಾದ ಬೆಳೆ ವಿಮಾ ನಷ್ಟ ಪರಿಹಾರದಲ್ಲಿ ಶೇಕಡಾ 25ರಷ್ಟು ಹಣವನ್ನು ಮುಂಚಿತವಾಗಿ ವಿಮಾ ಸಂಸ್ಥೆಯು ನಿಯಮಾನುಸಾರ ನೀಡತಕ್ಕದ್ದು. ಬೆಳೆ ಕಟಾವು ಪ್ರಯೋಗಗಳ ಆಧಾರದ ಮೇಲೆ ಬೆಳೆ ಇಳುವರಿ ಮಾಹಿತಿ ಬಂದ ನಂತರ ಅಂತಿಮ ಬೆಳೆ ವಿಮಾ ನಷ್ಟ ಪರಿಹಾರದಲ್ಲಿ ಈ ಹಣವನ್ನು ನಿಯಾಮಾನುಸಾರ ಹೊಂದಾಣಿಕೆ

ಮಾಡತಕ್ಕದ್ದು. ಈ ಬಗ್ಗೆ ವರದಿಯನ್ನು ನೀಡಲು ಜಿಲ್ಲಾ ಜಿಲ್ಲಾಧಿಕಾರಿಯವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

ಈ ಯೋಜನೆಯಡಿ ಕಟಾವಿನ ನಂತರ ಬೆಳೆಯನ್ನು ಜಮೀನಿನಲ್ಲೇ ಒಣಗಲು ಬಿಟ್ಟಂತಹ ಸಂದರ್ಭದಲ್ಲಿ ಎರಡು ವಾರಗಳೊಳಗೆ (ಹದಿನಾಲ್ಕು ದಿನಗಳು) ಚಂಡಮಾರುತ, ಚಂಡಮಾರುತ ಸಹಿತ ಮಳೆ ಮತ್ತು ಅಕಾಲಿಕ ಮಳೆಯಿಂದಾಗಿ ಬೆಳೆನಾಶವಾದರೆ ವೈಯಕ್ತಿಕವಾಗಿ ವಿಮಾ ಸಂಸ್ಥೆಯು ನಷ್ಟ ನಿರ್ಧಾರ ಮಾಡಿ ಬೆಳೆ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ರಾಜ್ಯದ ಎಲ್ಲಾ ಜಿಲ್ಲೆಗಳನ್ನು ಒಳಪಡಿಸಲಾಗಿದೆ. ರೈತರು ಈ ಬಗ್ಗೆ ಸಂಬಂಧಪಟ್ಟ ಹಣಕಾಸು ಸಂಸ್ಥೆ ಅಥವಾ ಅನುಷ್ಠಾನಗೊಳಿಸುವ ವಿಮಾ ಸಂಸ್ಥೆಗಳ ಕಛೇರಿಗಳಿಗೆ ತಕ್ಷಣ ಸೂಚನೆ ನೀಡಬೇಕು ಮತ್ತು ಯಾವುದೇ ಸಂದರ್ಭದಲ್ಲಿ ಬೆಳೆ ವಿಮೆ ಮಾಡಿಸಿದ ಬೆಳೆಯ ವಿವರಗಳನ್ನು, ಹಾನಿಯ ವ್ಯಾಪ್ತಿ ಹಾಗೂ ಹಾನಿಗೆ ಕಾರಣಗಳನ್ನು 48 ಗಂಟೆಗಳೊಳಗಾಗಿ ತಿಳಿಸಬೇಕು. ನಷ್ಟದ ಬಗೆಗಿನ ಮಾಹಿತಿಯನ್ನು ಸ್ವೀಕರಿಸಿದ ಮೇಲೆ ವಿಮಾ ಸಂಸ್ಥೆಗಳು ಬೆಳೆ ನಷ್ಟವನ್ನು ನಿರ್ಧರಿಸುವುದಕ್ಕೆ ನಷ್ಟ ನಿರ್ಧಾರಕರನ್ನು ಸಂಬಂಧಪಟ್ಟ ಪ್ರದೇಶಕ್ಕೆ ನಿಯೋಜಿಸಬೇಕು. ಜಿಲ್ಲಾ ಕಂದಾಯ ಇಲಾಖೆ, ಕೃಷಿ ಹಾಗು ತೋಟಗಾರಿಕಾ ಇಲಾಖೆಯ ಆಡಳಿತವು ಬೆಳೆ ನಷ್ಟದ ಪ್ರಮಾಣವನ್ನು ನಿರ್ಧರಿಸುವಲ್ಲಿ ವಿಮಾ ಸಂಸ್ಥೆಯವರಿಗೆ ನೆರವು ನೀಡತಕ್ಕದ್ದು.

ಬೆಳೆ ನಷ್ಟವನ್ನು ಜಿಲ್ಲಾ ಮಟ್ಟದಲ್ಲಿ ಕೃಷಿ, ಕಂದಾಯ ಮತ್ತು ತೋಟಗಾರಿಕೆ ಇಲಾಖೆಗಳ ಅಧಿಕಾರಿಗಳು, ಸಂಬಂಧಿಸಿದ ವಿಮಾ ಸಂಸ್ಥೆಯ ಅಧಿಕಾರಿಗಳು, ಲೀಡ್ ಬ್ಯಾಂಕ್ ಅಧಿಕಾರಿಗಳನ್ನೊಳಗೊಂಡ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಸಮಿತಿಯು ಅಂದಾಜಿಸಿ ತೀರ್ಮಾನಿಸಿದಂತೆ ವಿಮೆ ಮಾಡಿಸಿದ ರೈತರಿಂದ ಅರ್ಜಿ ಬಂದ ನಂತರ ಒಂದು ತಿಂಗಳೊಳಗೆ ವಿಮಾ ಸಂಸ್ಥೆಗಳು ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸತಕ್ಕದ್ದು.

ಸಾಮಾನ್ಯ ಬೆಳೆ ಅಂದಾಜು ಸಮೀಕ್ಷೆಯಡಿ ರಾಜ್ಯ ಸರ್ಕಾರವು ನಡೆಸುವ ಬೆಳೆ ಕಟಾವು ಪ್ರಯೋಗಗಳ ಆಧಾರದ ಮೇಲೆ ಕಂಡುಹಿಡಿಯಲಾದ ಇಳುವರಿ ಮಾಹಿತಿಯನ್ನು ಮಾತ್ರ ಪರಿಗಣಿಸಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಲೆಕ್ಕಹಾಕಿ ಇತ್ಯರ್ಥಪಡಿಸತಕ್ಕದ್ದು. ಇತರೆ ಇಳುವರಿ ಅಂದಾಜು ಮಾಡುವಂತಹ ವಿಧಾನಗಳಾದ ಆಣೆವಾರಿ ಅಥವಾ ರಾಜ್ಯ ಸರ್ಕಾರವು ಅಥವಾ ಯಾವುದೇ ಇಲಾಖೆ ಅಥವಾ ಸಂಸ್ಥೆ, ಕ್ಷಾಮ, ಬರ, ಪ್ರವಾಹ ಎಂದು ಘೋಷಿಸಿ ಇಳುವರಿ ನಷ್ಟವನ್ನು ಅಂದಾಜು ಮಾಡುವ ಮಾಹಿತಿಯನ್ನು ಈ ಯೋಜನೆಯಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಲೆಕ್ಕಹಾಕಲು ಪರಿಗಣಿಸತಕ್ಕದ್ದಲ್ಲ.

ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ, ಇವರು ಅಧಿಸೂಚಿತ ಬೆಳೆಗಳಿಗೆ ಸಾಮಾನ್ಯ ಬೆಳೆ ಅಂದಾಜು ಸಮೀಕ್ಷೆಯಡಿ ಎಲ್ಲಾ ಜಿಲ್ಲೆಗಳಲ್ಲಿ ಘಟಕವಾರು ಅಂದರೆ ಹೋಬಳಿವಾರು ಹಾಗೂ ಗ್ರಾಮ ಪಂಚಾಯಿತಿವಾರು ಬೆಳೆ ಕಟಾವು ಪ್ರಯೋಗಗಳನ್ನು ನಡೆಸಲು ಯೋಜಿಸುವುದು ಹಾಗೂ ಮೂಲ ಕಾರ್ಯಕರ್ತರುಗಳಿಗೆ ತರಬೇತಿಯ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು ಹಾಗೂ ಯಾವುದಾದರೂ ಘಟಕದಲ್ಲಿ ಒಂದಕ್ಕಿಂತ ಹೆಚ್ಚಿನ ಕೃಷಿ ಹವಾಮಾನ ವಲಯಗಳು ಕಂಡುಬಂದಲ್ಲಿ, ಆ ಘಟಕದಲ್ಲಿ ಕೃಷಿ ಹವಾಮಾನ ವಲಯಗಳು ಹೊಂದಿರತಕ್ಕ ಕ್ಷೇತ್ರಕ್ಕೆ ಅನುಗುಣವಾಗಿ ಬೆಳೆ ಕಟಾವು ಪ್ರಯೋಗಗಳನ್ನು ನಿಗದಿಪಡಿಸತಕ್ಕದ್ದು.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆಯ ಮಾರ್ಗಸೂಚಿಯನ್ವಯ ಬೆಳೆ ಕಟಾವು ಪ್ರಯೋಗಗಳನ್ನು ಮೊಬೈಲ್ ಆಪ್ ಮೂಲಕ ಮಾಡುವ ಕುರಿತು ಎಲ್ಲಾ ಮೂಲ ಕಾರ್ಯಕರ್ತರುಗಳಿಗೆ ಸೂಕ್ತ ತರಬೇತಿಯನ್ನು ನೀಡಲು ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆರವರು ಕ್ರಮವಹಿಸುವುದು.

ಬೆಳೆ ಕಟಾವು ಪ್ರಯೋಗಗಳನ್ನು ನಡೆಸುವ ಕುರಿತು ಅನುಷ್ಠಾನ ವಿಮಾ ಸಂಸ್ಥೆಗಳಿಗೆ ಕಡ್ಡಾಯವಾಗಿ ಮಾಹಿತಿ ನೀಡಿ, ವಿಮಾ ಸಂಸ್ಥೆಯವರು ಬೆಳೆ ಕಟಾವು ಪ್ರಯೋಗಗಳಲ್ಲಿ ಹಾಜರಾಗುವಂತೆ ಹಾಗು ಬೆಳೆ ಕಟಾವು ಪ್ರಯೋಗಗಳಲ್ಲಿ ಪಾರದರ್ಶಕತೆ ಇರುವಂತೆ ಜಿಲ್ಲಾಡಳಿತಗಳು ಕ್ರಮವಹಿಸುವುದು.

ಪ್ರಸ್ತುತ ಸಾಲು ಹಾಗು ಹಂಗಾಮಿನಲ್ಲಿ, ಯಾವುದೇ ಅಧಿಸೂಚಿತ ವಿಮಾ ಘಟಕದಲ್ಲಿ, ಅವಶ್ಯಕತೆಗೆ ತಕ್ಕಂತೆ ಬೆಳೆ ವಿಸ್ತೀರ್ಣ ಲಭ್ಯವಿಲ್ಲದ ಕಾರಣ ಯಾವುದೇ ಬೆಳೆಗೆ ನಿಗದಿ ಪಡಿಸಿದ ಸಂಖ್ಯೆಯ ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳಲು ಸಾಧ್ಯವಾಗದಿದ್ದಲ್ಲಿ, ಮೇಲಿನ ಹಂತದ ಘಟಕದ (Yield of next higher unit) ಇಳುವರಿ ಮಾಹಿತಿಯನ್ನು ಬೆಳೆ ವಿಮಾ ನಷ್ಟ ಪರಿಹಾರದ ಲೆಕ್ಕಾಚಾರ ಹಾಕಲು ಪರಿಗಣಿಸತಕ್ಕದ್ದು.

ಪ್ರಸ್ತುತ ಸಾಲು ಮತ್ತು ಹಂಗಾಮಿನಲ್ಲಿ, ಅಧಿಸೂಚಿಸಿರುವ ಬೆಳೆಗಳಡಿ ಬೆಳೆ ಕಟಾವು ಪ್ರಯೋಗಗಳ ಫಲಿತಾಂಶ ಲಭ್ಯವಿರುವ ಎಲ್ಲಾ ಬೆಳೆಗಳಿಗೆ ವಿಮಾ ಸಂಸ್ಥೆಗಳು ಮುಂದಿನ ವರ್ಷದ ಜನವರಿ ಮಾಹೆಯ ಅಂತ್ಯದೊಳಗೆ ಬೆಳೆ ವಿಮಾ ನಷ್ಟ ಪರಿಹಾರವನ್ನು ಲೆಕ್ಕ ಹಾಕಿ, ವಿಮೆ ಮಾಡಿಸಿದ ರೈತರಿಗೆ ಇತ್ಯರ್ಥಪಡಿಸತಕ್ಕದ್ದು.

ಕೃಷಿ, ತೋಟಗಾರಿಕೆ, ಕಂದಾಯ ಹಾಗೂ ಸಂಬಂಧಪಟ್ಟ ಇತರ ಇಲಾಖೆಗಳು ಯೋಜನೆಯನ್ನು ಅನುಷ್ಠಾನಗೊಳಿಸಲು ವಿಮಾ ಸಂಸ್ಥೆಗಳು ಕೈಗೊಳ್ಳುವ ಪ್ರಚಾರ, ಪ್ರಕಟಣೆ ಮತ್ತು ತರಬೇತಿ ನೀಡುವಲ್ಲಿ ಸಹಕಾರ ನೀಡತಕ್ಕದ್ದು. ಹಾಗೂ ಕೃಷಿ ಇಲಾಖೆ, ಕಂದಾಯ ಇಲಾಖೆ, ಸಹಕಾರ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಸಂಬಂಧಪಟ್ಟ ಇಲಾಖೆಗಳು ಪ್ರಸ್ತುತ ಸಾಲು ಹಾಗು ಹಂಗಾಮಿನಲ್ಲಿ ಅಧಿಸೂಚಿಸಿರುವ ಬೆಳೆಗಳು ಮತ್ತು ಘಟಕಗಳ ಬಗ್ಗೆ ಬ್ಯಾಂಕುಗಳ, ರೈತ ಸಂಪರ್ಕ ಕೇಂದ್ರಗಳ ಮತ್ತು ಗ್ರಾಮ ಪಂಚಾಯತಿ ಕಛೇರಿಗಳ ಸೂಚನಾ ಫಲಕಗಳ ಮೇಲೆ ಪ್ರಕಟಿಸಿ ವ್ಯಾಪಕ ಪ್ರಚಾರ ಕೈಗೊಳ್ಳತಕ್ಕದ್ದು.

ಅನುಷ್ಠಾನ ವಿಮಾ ಸಂಸ್ಥೆಗಳು ಅವಶ್ಯಕತೆ ಇದ್ದಲ್ಲಿ, ಸ್ವಂತ ಅಥವಾ ಇತರ ಸಂಸ್ಥೆಗಳ ಮೂಲಕ ವಿಮೆ ಮಾಡಿಸಿದ ಬಿತ್ತನೆ ಕ್ಷೇತ್ರ ಮತ್ತು ಬೆಳೆಗಳ ಪರಿಸ್ಥಿತಿಯ ಬಗ್ಗೆ ಖಾತ್ರಿ ಪಡಿಸಿಕೊಳ್ಳಲು ಉಪಗ್ರಹ ಆಧಾರಿತ ಮಾಹಿತಿಯನ್ನು ಬಳಸಿಕೊಳ್ಳಬಹುದು.

ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಲ್ಲಿ ಅನುಷ್ಠಾನ ವಿಮಾ ಸಂಸ್ಥೆಗಳು ಬೆಳೆ ವಿಮಾ ಯೋಜನೆಯಲ್ಲಿ ಭಾಗವಹಿಸಲಿರುವ ವಿವಿಧ ಸಂಸ್ಥೆಗಳ ಜೊತೆಯಲ್ಲಿ ಸಮನ್ವಯ ಸಾಧಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

[signature]

(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಕೃಷಿ ಇಲಾಖೆ (ಯೋಜನೆ).

ಕಂಪೈಲರ್, ಕರ್ನಾಟಕ ಗೆಜೆಟ್, ಬೆಂಗಳೂರು, ಇವರು ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕ್ರಮ ತೆಗೆದುಕೊಳ್ಳುವುದು.

ಇವರಿಗೆ,

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.

2) ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.

3) [illegible] ಬೆಳೆ ವಿಮಾ [illegible] ಸಿಕಂದರಾಬಾದ್.

4) [illegible]

5) [illegible]

6) ಕೃಷಿ ನಿರ್ದೇಶಕರು, ಬೆಂಗಳೂರು.

7) ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.

8) ನಿರ್ದೇಶಕರು (ಪಿಎಫ್‌ಡಿ), ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

9) ಎಲ್ಲಾ ಜಿಲ್ಲಾಧಿಕಾರಿಗಳು.

10) ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.

11) ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು

12) ಎಲ್ಲಾ ಜಿಲ್ಲಾ ತೋಟಗಾರಿಕಾ ಉಪ ಕೃಷಿ ನಿರ್ದೇಶಕರು

13) ಎಲ್ಲಾ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು.

14) ಎಲ್ಲಾ ಲೀಡ್ ಬ್ಯಾಂಕುಗಳು.

15) ಎಲ್ಲಾ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳು.

16) ಎಲ್ಲಾ ನೋಡಲ್ ಬ್ಯಾಂಕುಗಳು.

17) ಎಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು.

18) ಪ್ರಾದೇಶಿಕ ವ್ಯವಸ್ಥಾಪಕರು, ಅಗ್ರಿಕಲ್ಚರ್ ಇನ್ಸೂರೆನ್ಸ್ ಕಂಪನಿ ಆಫ್ ಇಂಡಿಯಾ ಲಿಮಿಟೆಡ್, ಕರ್ನಾಟಕ ಪ್ರಾದೇಶಿಕ ಕಛೇರಿ, ಕರ್ನಾಟಕ ಪ್ರದೇಶ ಕೃಷಿಕ ಸಮಾಜ, ನಂ.18, 3ನೇ ಮಹಡಿ, ನೃಪತುಂಗ ರಸ್ತೆ, ಹಡ್ಸನ್ ವೃತ್ತ, ಬೆಂಗಳೂರು – 560 009.

19) ಅನುಷ್ಠಾನ ವಿಮಾ ಸಂಸ್ಥೆಗಳು

20) ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ -4), ಬೆಂಗಳೂರು.

21) ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.

22) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.

23) ರಕ್ಷಾ ಕಡತ : ಹೆಚ್ಚುವರಿ ಪ್ರತಿ.

(ಕ್ರಮ ಸಂಖ್ಯೆ: 3, 9 ರಿಂದ 11, 18, 19 ರವರೆಗೆ ಕೃಷಿ ನಿರ್ದೇಶಕರ ಮೂಲಕ, ಕ್ರಮ ಸಂಖ್ಯೆ:12 ತೋಟಗಾರಿಕಾ ಆಯುಕ್ತರು / ನಿರ್ದೇಶಕರ ಮೂಲಕ, ಕ್ರಮ ಸಂಖ್ಯೆ:13 ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಇವರ ಮೂಲಕ, ಕ್ರಮ ಸಂಖ್ಯೆ:14, 15 & 16 ರವರೆಗೆ– ಎಸ್.ಎಲ್.ಬಿ.ಸಿ. ಮೂಲಕ ಹಾಗೂ ಕ್ರಮ ಸಂಖ್ಯೆ: 17 – ಅಪೆಕ್ಸ್ ಬ್ಯಾಂಕ್‌ನ ಮೂಲಕ)